**All India Radio: Bangalore**
**National Bulletin In Kannada**
**13.01.2025  07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**13.01.2025  07.35 a.m.**
**<><><><>**

ಮುಖ್ಯಾಂಶಗಳು

1. ಪ್ರಯಾಗ್‌ರಾಜ್‌ನಲ್ಲಿ ಮಹಾಕುಂಭಮೇಳಕ್ಕೆ ವಿಧ್ಯುಕ್ತ ಚಾಲನೆ : ತ್ರಿವೇಣಿ ಸಂಗಮದಲ್ಲಿ ಭಕ್ತಾದಿಗಳಿಂದ ಅಮೃತ ಸ್ನಾನ
2. ಪ್ರಧಾನಿ ನರೇಂದ್ರ ಮೋದಿ ಕಾಶ್ಮೀರ ಭೇಟಿ ; ಇಂದು ೨ ಸಾವಿರದ ೭೦೦ ಕೋಟಿ ರೂಪಾಯಿ ವೆಚ್ಚದ ಸೋನಮಾರ್ಗ್ ಸುರಂಗ ಯೋಜನೆ ಉದ್ಘಾಟನೆ
3. ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಇಂದಿನಿಂದ ಎರಡು ದಿನಗಳ ಸ್ಪೇನ್ ಪ್ರವಾಸ; ಸಹವರ್ತಿ ಮ್ಯಾನ್ಯೂವಲ್ ಅಲ್ಬರೇಸ್ ಅವರೊಂದಿಗೆ ದ್ವಿಪಕ್ಷೀಯ ಸಭೆ
4. ನವದೆಹಲಿಯಲ್ಲಿಂದು ಖೋ ಖೋ ವಿಶ್ವಕಪ್ ಆರಂಭ ; ಉದ್ಘಾಟನಾ ಪಂದ್ಯದಲ್ಲಿ ಭಾರತ-ನೇಪಾಳ ಸೆಣಸು

<><><><>

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿಂದು, ಪುಷ್ಯಪೂರ್ಣಿಮೆಯಂದು ಅಮೃತಸ್ನಾನದೊಂದಿಗೆ ಮಹಾಕುಂಭಮೇಳ ವಿಧ್ಯುಕ್ತ ಚಾಲನೆ ದೊರೆತಿದೆ. ೪೫ ದಿನಗಳ ಕಾಲ ನಡೆಯಲಿರುವ ಮಹಾಕುಂಭಮೇಳಕ್ಕಾಗಿ ಯಾತ್ರಾರ್ಥಿಗಳಿಗಾಗಿ ವ್ಯಾಪಕ ವ್ಯವಸ್ಥೆ ಮಾಡಲಾಗಿದೆ. ಮಹಾಕುಂಭದಲ್ಲಿ ಪಾಲ್ಗೊಳ್ಳಲು ದೇಶ-ವಿದೇಶಗಳಿಂದ ಈಗಾಗಲೇ ಲಕ್ಷಾಂತರ ಸಂಖ್ಯೆಯಲ್ಲಿ ಶ್ರದ್ಧಾಳುಗಳು ಪ್ರಯಾಗ್‌ರಾಜ್‌ಗೆ ಆಗಮಿಸುತ್ತಿದ್ದಾರೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಶ್ರದ್ಧಾಳುಗಳ ಆರೋಗ್ಯ ರಕ್ಷಣೆ, ಅನುಕೂಲ, ಸೌಕರ್ಯ ಹಾಗೂ ಇತರ ಅಗತ್ಯಗಳಿಗಾಗಿ ವ್ಯಾಪಕ ವ್ಯವಸ್ಥೆ ಮಾಡಲಾಗಿದೆ. ಈ ಸಂದರ್ಭದಲ್ಲಿ ದೇಶದ ಶ್ರೀಮಂತ ಸಂಸ್ಕೃತಿ ಹಾಗೂ ಪರಂಪರೆಯನ್ನು ಪ್ರತಿಬಿಂಬಿಸುವ ಅನೇಕ ಕಾರ್ಯಕ್ರಮ ಹಾಗೂ ತಾಣಗಳನ್ನು ಆಯೋಜಿಸಲಾಗಿದೆ. ತೀವ್ರ ಜನಸಂದಣಿ ಏರ್ಪಡುತ್ತಿರುವ ಹಿನ್ನೆಲೆಯಲ್ಲಿ ಜಪಾನ್ ಮಿಯಾ ವಾಕಿ ತಂತ್ರಜ್ಞಾನ ಬಳಸಿ ವಿವಿಧೆಡೆ

ಶುದ್ಧ ಆಮ್ಲಜನಕ ಹಾಗೂ ವಾಯುಗುಣಮಟ್ಟ ಕಾಪಾಡಿಕೊಳ್ಳಲು ವ್ಯವಸ್ಥೆ ಕಲ್ಪಿಸಲಾಗಿದೆ. ಕಳೆದ ಎರಡು ವರ್ಷಗಳಲ್ಲಿ ೫೫ ಸಾವಿರ ಚದುರ ಮೀಟರ್ ಜಾಗದಲ್ಲಿ ಒಂದು ಲಕ್ಷ ೨೦ ಸಾವಿರ ಸಸಿಗಳನ್ನು ನೆಡಸಲಾಗಿದ್ದು, ಹಸಿರು ವಾತಾವರಣ ನಿರ್ಮಿಸಲಾಗಿದೆ. ಕುಂಭಮೇಳ ಮುಂದಿನ ತಿಂಗಳ ೨೬ರವರೆಗೆ ನಡೆಯಲಿದೆ.

<><><>

ಪ್ರಯಾಗ್ರಾಜ್ ಪ್ರದೇಶದಲ್ಲಿ ಮಹಾಕುಂಭ ೨೦೨೫ ಕ್ಕೆ ಭಾರತೀಯ ರೈಲ್ವೆಯ ಸನ್ನದ್ಧತೆಯನ್ನು ಹೆಚ್ಚಿಸಲು ಹಲವಾರು ಪ್ರಮುಖ ಉಪಕ್ರಮಗಳಿಗೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಚಾಲನೆ ನೀಡಿದ್ದಾರೆ. ಈ ಕುರಿತು ನಿನ್ನೆ ಸುದ್ದಿಗಾರೊಂದಿಗೆ ಮಾತನಾಡಿದ ಅವರು, ರೈಲ್ವೆ ಮಂಡಳಿ ಮಟ್ಟದಲ್ಲಿ ಮೀಸಲಾದ ವಾರ್ ರೂಮ್ ಉದ್ಘಾಟಿಸಲಾಗಿದ್ದು, ಈ ವಾರ್ ರೂಮ್ ದಿನದ ೨೪ ಗಂಟೆಯೂ ಕಾರ್ಯನಿರ್ವಹಿಸಲಿದೆ, ಇದರಲ್ಲಿ ಕಾರ್ಯಾಚರಣೆ, ವಾಣಿಜ್ಯ, ಇಂಜಿನಿಯರಿಂಗ್ ಮತ್ತು ಎಲೆಕ್ಟ್ರಿಕಲ್ ವಿಭಾಗಗಳ ಅಧಿಕಾರಿಗಳು ಮೇಲ್ವಿಚಾರಣೆ ಮತ್ತು ಚಟುವಟಿಕೆಗಳನ್ನು ಸಮನ್ವಯಗೊಳಿಸಲಿದ್ದಾರೆ. ೯ ರೈಲ್ವೇ ನಿಲ್ದಾಣಗಳಲ್ಲಿ ಅಳವಡಿಸಲಾಗಿರುವ ೧ ಸಾವಿರದ ೧೭೬ ಸಿಸಿಟಿವಿ ಕ್ಯಾಮೆರಾಗಳು ನೈಜ-ಸಮಯದ ಮೇಲ್ವಿಚಾರಣೆಗೆ ಅನುವು ಮಾಡಿಕೊಡುತ್ತವೆ ಎಂದು ಹೇಳಿದರು.

ಧ್ವನಿ: ಅಶ್ವಿನಿ ವೈಷ್ಣವ್ (೩೫ ಸೆಕೆಂಡ್ಸ್)

<><><>

ದೇಶದ ಶ್ರೀಮಂತ ಸಂಸ್ಕೃತಿಯನ್ನು ಪ್ರದರ್ಶಿಸುವ ನಿಟ್ಟಿನಲ್ಲಿ ಕೇಂದ್ರ ಸಂಸ್ಕೃತಿ ಸಚಿವಾಲಯ ಪ್ರಯಾಗ್‌ರಾಜ್‌ನ ಮಹಾಕುಂಭ ನಗರದಲ್ಲಿ ರಚಿಸಿರುವ ಕಲಾಗ್ರಾಮವನ್ನು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ನಿನ್ನೆ ಸಂಜೆ ಉದ್ಘಾಟಿಸಿದರು. ಬಳಿಕ ಮಾಧ್ಯಮಗಳಿಗೆ ಮಾಹಿತಿ ನೀಡಿದ ಸಚಿವರು, ಮುಂದಿನ ೪೫ ದಿನಗಳಲ್ಲಿ, ೧೪ ಸಾವಿರದ ಆರುನೂರಕ್ಕೂ ಹೆಚ್ಚು ಕಲಾವಿದರು ಕಲಾಗ್ರಾಮದಲ್ಲಿ ಪ್ರದರ್ಶನ ನೀಡಲಿದ್ದಾರೆ. ಭಕ್ತರು ಮತ್ತು ಪ್ರವಾಸಿಗರು ದೇಶದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯ ಬಗ್ಗೆ ತಿಳಿದುಕೊಳ್ಳಲು ಇದು ಅವಕಾಶವನ್ನು ಕಲ್ಪಿಸುತ್ತದೆ ಎಂದು ಹೇಳಿದರು.

ಧ್ವನಿ: ಗಜೇಂದ್ರ ಸಿಂಗ್ ಶೇಖಾವತ್ (೩೧ ಸೆಕೆಂಡ್ಸ್)

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಅವರಿಂದು ಕಾಶ್ಮೀರಕ್ಕೆ ಭೇಟಿ ನೀಡಲಿದ್ದು, ಸೋನಮಾರ್ಗ್ ಸುರಂಗ ಯೋಜನೆಯನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಪ್ರಧಾನಮಂತ್ರಿಯವರು ಸುರಂಗ ಮಾರ್ಗ ನಿರ್ಮಿಸಿದ ಕಾರ್ಮಿಕರನ್ನು ಭೇಟಿ ಮಾಡಲಿದ್ದಾರೆ. ಸುಮಾರು ೧೨ ಕಿಲೋಮೀಟರ್ ಉದ್ದದ ಈ ಸುರಂಗ ಮಾರ್ಗವನ್ನು ೨ ಸಾವಿರದ ೭೦೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿದೆ. ಈ ಸುರಂಗ ಯೋಜನೆ, ಶ್ರೀನಗರ - ಸೋನಮಾರ್ಗ್ ನಡುವೆ ಲೇಹ್ ಮೂಲಕ ಸಂಪರ್ಕ ಕಲ್ಪಿಸಲಿದೆ. ಈ ಸರ್ವಋತು ಮಾರ್ಗ, ಲಡಾಖ್ ವಲಯಕ್ಕೆ ಭೂಕುಸಿತ ಮತ್ತು ಹಿಮಬಂಡೆ ಪಾತಕ್ಕೆ ಪರ್ಯಾಯವಾಗಿ ಸುರಕ್ಷಿತ ಸಂಚಾರ ವ್ಯವಸ್ಥೆ ಕಲ್ಪಿಸಲಿದೆ. ಪ್ರವಾಸಿಗರಿಗೆ ಹಾಗೂ ಈ ಭಾಗದ ಆರ್ಥಿಕ ಚಟುವಟಿಕೆಗಳಿಗೆ ಇದರಿಂದ ಅತ್ಯಧಿಕ ಪ್ರಯೋಜನವಾಗಲಿದೆ. ಜೋಜಿಲ್ಲಾ ಸುರಂಗ ಮಾರ್ಗದ ಕಾಮಗಾರಿಯೂ ಪ್ರಗತಿಯಲ್ಲಿದ್ದು, ೨೦೨೮ರ ವೇಳೆಗೆ ಪೂರ್ತಿಗೊಳ್ಳುವ ನಿರೀಕ್ಷೆಯಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಕಾಶ್ಮೀರ ಭೇಟಿ ಹಿನ್ನೆಲೆಯಲ್ಲಿ ಮಧ್ಯಕಾಶ್ಮೀರದ ಶ್ರೀನಗರ ಮತ್ತು ಗಂದೇರ್‌ಬಾಲ್ ಜಿಲ್ಲೆಗಳಲ್ಲಿ ವ್ಯಾಪಕ ಬಂದೋಬಸ್ತ್ ಮಾಡಲಾಗಿದೆ.

<><><><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಇಂದಿನಿಂದ ಎರಡು ದಿನಗಳ ಸ್ಪೇನ್ ಪ್ರವಾಸ ಕೈಗೊಳ್ಳಲಿದ್ದಾರೆ. ವಿದೇಶಾಂಗ ವ್ಯವಹಾರಗಳ ಸಚಿವರಾಗಿ ಸ್ಪೇನ್‌ಗೆ ಅವರು ಕೈಗೊಳ್ಳುತ್ತಿರುವ ಮೊದಲ ಭೇಟಿ ಇದಾಗಿದೆ. ಭೇಟಿಯ ಸಮಯದಲ್ಲಿ ಅವರು, ಸ್ಪೇನ್‌ನ ನಾಯಕರನ್ನು ಭೇಟಿಯಾಗಲಿದ್ದು, ತಮ್ಮ ಸಹವರ್ತಿ ಮ್ಯಾನ್ಯೂವಲ್ ಅಲ್ಬರೇಸ್ ಅವರೊಂದಿಗೆ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಹಾಗೂ ಜಾಗತಿಕ ವಿಷಯಗಳ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಪ್ರವಾಸದ ಭಾಗವಾಗಿ ಅವರು, ೯ನೇ ವಾರ್ಷಿಕ ಸ್ಪೇನ್ ರಾಯಭಾರಿಗಳ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಇದರ ಜೊತೆಗೆ ಅಲ್ಲಿರುವ ಭಾರತೀಯ ಸಮುದಾಯವನ್ನು ಭೇಟಿಯಾಗಲಿದ್ದಾರೆ.

<><><><>

ದೆಹಲಿಯಲ್ಲಿ ನಿನ್ನೆ ನಡೆದ ರಾಷ್ಟ್ರೀಯ ಯುವ ಜನೋತ್ಸವದಲ್ಲಿ ಕರ್ನಾಟಕ ೨ ವಿಭಾಗಗಳಲ್ಲಿ ೨ನೇ ಸ್ಥಾನಕ್ಕೆ ಭಾಜನವಾಗಿದೆ. ಮಂಡ್ಯ ಜಿಲ್ಲೆಯ ಡೊಳ್ಳು ಕುಣಿತ ಹಾಗೂ ಜಾನಪದ ಗೀತೆ ತಂಡಗಳು ಈ ಪ್ರಶಸ್ತಿಗೆ ಪಾತ್ರವಾಗಿವೆ. ಯುವಜನೋತ್ಸವದಲ್ಲಿ ಕರ್ನಾಟಕದಿಂದ ಸಾಂಸ್ಕೃತಿಕ ಪ್ರತಿನಿಧಿಗಳು

ಹಾಗೂ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು ೭೬ ಮಂದಿ ಪಾಲ್ಗೊಂಡಿದ್ದರು. ಈ ಕುರಿತು ಕೇಂದ್ರ ಯುವಜನ ಸೇವಾ ಮತ್ತು ಕ್ರೀಡಾ ಸಚಿವಾಲಯದ ಬೆಂಗಳೂರಿನ ಎನ್‌ಎಸ್‌ಎಸ್ ಪ್ರಾಂತ್ಯ ಕೇಂದ್ರದ, ಯುವಜನಾಧಿಕಾರಿ ಯಲ್ಲಪ್ಪ ಉಪ್ಪಿನ್ ಆಕಾಶವಾಣಿಯೊಂದಿಗೆ ಹೆಚ್ಚಿನ ಮಾಹಿತಿ ಹಂಚಿಕೊಂಡಿದ್ದಾರೆ.

ಬೈಟ್ : ಯುವಜನಾಧಿಕಾರಿ ಯಲ್ಲಪ್ಪ ಉಪ್ಪಿನ್ (೩೬ ಸೆಕೆಂಡ್ಸ್)

<><><><>

ಉತ್ತರ ಭಾರತದಲ್ಲಿ, ವಿಶೇಷವಾಗಿ ಪಂಜಾಬ್, ಹರಿಯಾಣ, ಹಿಮಾಚಲ ಪ್ರದೇಶ, ದೆಹಲಿ, ಜಮ್ಮು ಮತ್ತು ಚಂಡೀಗಢದಲ್ಲಿ ಇಂದು ಸುಗ್ಗಿಯ ಹಬ್ಬ ಲೋಹ್ರಿಯನ್ನು ಆಚರಿಸಲಾಗುತ್ತಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಲೋಹ್ರಿ ಸಂದರ್ಭದಲ್ಲಿ ದೇಶದ ಜನತೆಗೆ ಶುಭಾಶಯ ಕೋರಿದ್ದಾರೆ. ನಾಳೆ ಆಚರಿಸಲಾಗುವ ಮಕರ ಸಂಕ್ರಾಂತಿ, ಪೊಂಗಲ್ ಮತ್ತು ಮಾಘ ಬಿಹು ಹಬ್ಬಗಳಿಗೂ ಅವರು ಶುಭಾಶಯ ಕೋರಿದ್ದಾರೆ. ಈ ಹಬ್ಬಗಳು ದೇಶದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯ ಸಂಕೇತಗಳಾಗಿವೆ ಮತ್ತು ಪ್ರತಿಯೊಬ್ಬರ ಜೀವನಕ್ಕೂ ಉತ್ಸಾಹ ಮತ್ತು ಸಂತೋಷವನ್ನು ತರುತ್ತವೆ ಎಂದು ರಾಷ್ಟ್ರಪತಿಗಳು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

<><><><>

೨೦೨೫ ರ ಖೋ ಖೋ ವಿಶ್ವಕಪ್ ಇಂದು ನವದೆಹಲಿಯ ಇಂದಿರಾ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಆರಂಭವಾಗಲಿದೆ. ಭಾರತೀಯ ಒಲಿಂಪಿಕ್ ಅಸೋಸಿಯೇಷನ್ ಸಹಯೋಗದೊಂದಿಗೆ ಈ ಆವೃತ್ತಿ ಆರಂಭಗೊಳ್ಳಲಿದ್ದು, ಉದ್ಘಾಟನಾ ಆವೃತ್ತಿಯಲ್ಲಿ ೨೦ ಪುರುಷರು ಮತ್ತು ೧೯ ಮಹಿಳಾ ತಂಡಗಳು ಭಾಗವಹಿಸಲಿವೆ. ಭಾರತ ಖೋ ಖೋ ಫೆಡರೇಶನ್ - ಕೆಕೆಎಫ್ಐ , ಪುರುಷ ಮತ್ತು ಮಹಿಳಾ ಸ್ಪರ್ಧೆಗಳಿಗೆ ತಲಾ ೧೫ ಸದಸ್ಯರ ತಂಡವನ್ನು ಪ್ರಕಟಿಸಿದೆ. ಪ್ರತೀಕ್ ವೈಕರ್ ನೇತೃತ್ವದ ಭಾರತೀಯ ಪುರುಷರ ತಂಡವು ನೇಪಾಳ, ಪೆರು, ಬ್ರೆಜಿಲ್ ಮತ್ತು ಭೂತಾನ್ ಜೊತೆ ಎ ಗುಂಪಿನಲ್ಲಿದೆ, ಪ್ರಿಯಾಂಕಾ ಇಂಗಲ್ ನೇತೃತ್ವದ ಮಹಿಳಾ ತಂಡವು ಇರಾನ್, ಮಲೇಷ್ಯಾ ಮತ್ತು ಕೊರಿಯಾ ಗಣರಾಜ್ಯದೊಂದಿಗೆ ಎ ಗುಂಪಿನಲ್ಲಿದೆ. ನಾಲ್ಕು ಗುಂಪುಗಳ ಅಗ್ರ ಎರಡು ತಂಡಗಳು ಕ್ವಾರ್ಟರ್ ಫೈನಲ್‌ಗೆ ಅರ್ಹತೆ ಪಡೆಯುತ್ತವೆ. ಜನವರಿ ೧೯ ರಂದು ಫೈನಲ್ ಪಂದ್ಯ ನಡೆಯಲಿದೆ. ಇಂದು, ಭಾರತೀಯ ಪುರುಷರ ತಂಡವು ನೇಪಾಳ ವಿರುದ್ಧದ ಆರಂಭಿಕ ಪಂದ್ಯದೊಂದಿಗೆ ತಮ್ಮ ಅಭಿಯಾನವನ್ನು ಪ್ರಾರಂಭಿಸುತ್ತಿದೆ. ಪಂದ್ಯ ರಾತ್ರಿ ೮:೩೦ಕ್ಕೆ

ಆರಂಭವಾಗಲಿದೆ. ಪಂದ್ಯದ ನೇರ ಪ್ರಸಾರವನ್ನು ಡಿಡಿ ಸ್ಪೋರ್ಟ್ಸ್ ಚಾನೆಲ್‌ನಲ್ಲಿ ವೀಕ್ಷಿಸಬಹುದಾಗಿದೆ.

<><><><>

ಮಹಿಳಾ ಹಾಕಿ ಇಂಡಿಯಾ ಲೀಗ್ ಕಳೆದ ರಾತ್ರಿ ಜಾರ್ಖಂಡ್‌ನ ರಾಂಚಿಯಲ್ಲಿ ಅದ್ದೂರಿ ಸಮಾರಂಭದೊಂದಿಗೆ ಆರಂಭವಾಯಿತು. ಶಾಸಕಿ ಕಲ್ಪನಾ ಸೊರೆನ್ ನಾಲ್ಕು ತಂಡಗಳ ನಾಯಕಿಯರೊಂದಿಗೆ ಮಹಿಳಾ ಹಾಕಿ ಇಂಡಿಯಾ ಲೀಗ್ ಟ್ರೋಫಿಯನ್ನು ಅನಾವರಣಗೊಳಿಸಿದರು. ಉದ್ಘಾಟನಾ ಪಂದ್ಯದಲ್ಲಿ , ಒಡಿಶಾ ವಾರಿಯರ್ಸ್ ಡೆಲ್ಲಿ ಎಸ್‌ಜಿ ಪೈಪರ್ಸ್ ಅನ್ನು ೪-೦ ಗೋಲುಗಳಿಂದ ಸೋಲಿಸಿತು. ಪೆನಾಲ್ಟಿ ಕಾರ್ನರ್‌ಗಳಿಂದ ಗಳಿಸಿದ ಎರಡು ಗೋಲುಗಳಿಗಾಗಿ ಯಿಬ್ಬಿ ಜಾನ್ಸೆನ್ ಪಂದ್ಯಶ್ರೇಷ್ಠ ಪ್ರಶಸ್ತಿಯನ್ನು ಗೆದ್ದರು. ರಾಂಚಿಯಲ್ಲಿಂದು ನಡೆಯುವ ಪಂದ್ಯದಲ್ಲಿ ಶ್ರಾಚಿ ರಾರ್ಹ್ ಬೆಂಗಾಲ್ ಟೈಗರ್ಸ್, ಜೆಎಸ್‌ಡಬ್ಲ್ಯೂ ಸೂರ್ಮಾ ಹಾಕಿ ಕ್ಲಬ್ ವಿರುದ್ಧ ಸೆಣಸಲಿದೆ. ಪಂದ್ಯ ಸಂಜೆ ೦೬:೦೦ ಗಂಟೆಗೆ ಪ್ರಾರಂಭವಾಗುತ್ತದೆ.

<><><><>

ಮುಂಬೈ ಫುಟ್‌ಬಾಲ್ ಅರೆನಾದಲ್ಲಿ ನಿನ್ನೆ ನಡೆದ ಇಂಡಿಯನ್ ಸೂಪರ್ ಲೀಗ್ ಫುಟ್‌ಬಾಲ್ ಪಂದ್ಯದಲ್ಲಿ, ಜೆಮ್ಶೆಡ್‌ಪುರ ಎಫ್‌ಸಿ ತಂಡ ಆತಿಥೇಯ ಮುಂಬೈ ಸಿಟಿ ಎಫ್‌ಸಿ ತಂಡವನ್ನು ೩-೦ ಗೋಲುಗಳಿಂದ ಸೋಲಿಸಿತು.

<><><><>